# ಕರ್ನಾಟಕ ಸರ್ಕಾರ

# ಮೈತ್ರಿ ಯೋಜನೆ

ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ

## ಕಂದಾಯ ಇಲಾಖೆ

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬಡತನ ರೇಖೆಗಿಂತ ಕೆಳಗಿರುವ ಲಿಂಗತ್ವ ಅಲ್ಪಸಂಖ್ಯಾತರಿಗೆ ಮಾಸಾಶನ ನೀಡುವ **"ಮೈತ್ರಿ"** ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ.

ಓದಲಾಗಿದೆ: 1. 2013-14 ನೇ ಸಾಲಿನ ಅಯವ್ಯಯ ಭಾಷಣದಲ್ಲಿ ಬಡತನ ರೇಖೆಗಿಂತ ಕೆಳಗಿರುವ ಲಿಂಗತ್ವ ಅಲ್ಪಸಂಖ್ಯಾತರಿಗೆ ರೂ.500 ಗಳ ಮಾಸಾಶನದ ಘೋಷಣೆ.

2. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸುತ್ತೋಲೆ ಸಂಖ್ಯೆ: ಮಮಇ 11 ಮಅನಿ 2013 ದಿನಾಂಕ: 29-07-2013

**ಪ್ರಸ್ತಾವನೆ:**

ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಸಂಕಷ್ಟದಲ್ಲಿರುವ ಲಿಂಗತ್ವ ಅಲ್ಪಸಂಖ್ಯಾತರಿಗೆ (ಹಿಜ್ರಾಗಳು, ಕೋಥಿಗಳು, ಜೋಗಪ್ಪಂದಿರು/ಎಫ್‌ಟುಎಂ/ಎಂಟುಎಫ್/ಮಂಗಳಮುಖಿಯರು) ಸಹಾಯ ನೀಡುವ ಉದ್ದೇಶದಿಂದ, ಬಡತನ ರೇಖೆಗಿಂತ ಕೆಳಗಿರುವ 40 ರಿಂದ 64 ವರ್ಷದೊಳಗಿರುವ ಲಿಂಗತ್ವ ಅಲ್ಪಸಂಖ್ಯಾತರಿಗೆ ರೂ.500ಗಳ ಮಾಸಾಶನ ನೀಡಲು "ಮೈತ್ರಿ" ಯೋಜನೆಯನ್ನು ಸರ್ಕಾರ 2013-14 ನೇ ಸಾಲಿನ ಅಯವ್ಯಯದಲ್ಲಿ ಘೋಷಿಸಿದೆ. 65ಕ್ಕಿಂತ ಹೆಚ್ಚು ವಯಸ್ಸಾದ ಲಿಂಗತ್ವ ಅಲ್ಪಸಂಖ್ಯಾತರು ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ಯೋಜನೆಯಡಿ ಪ್ರಯೋಜನ ಪಡೆಯಬಹುದಾಗಿರುತ್ತದೆ. ಮುಂದುವರೆದು, ಮೇಲೆ ಓದಲಾದ ಉಲ್ಲೇಖ(2) ರನ್ವಯ, ಲಿಂಗತ್ವ ಅಲ್ಪಸಂಖ್ಯಾತರನ್ನು ಗುರುತಿಸುವ ಬಗ್ಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯು ಹೊರಡಿಸಿರುವ ಸುತ್ತೋಲೆಯನ್ನು ಆಧರಿಸಿ ಲಿಂಗತ್ವ ಅಲ್ಪಸಂಖ್ಯಾತರನ್ನು ಗುರುತಿಸಲು ಸರ್ಕಾರ ತೀರ್ಮಾನಿಸಿರುವ ಹಿನ್ನಲೆಯಲ್ಲಿ ಕೆಳಕಂಡ ಆದೇಶ;

**ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 95 ಡಿಎಸ್‌ಪಿ 2013, ಬೆಂಗಳೂರು.**
**ದಿನಾಂಕ:01/08/2013.**

ರಾಜ್ಯದಲ್ಲಿನ ಬಡತನ ರೇಖೆಗಿಂತ ಕೆಳಗಿರುವ 40 ರಿಂದ 64 ವರ್ಷದೊಳಗಿರುವ ಲಿಂಗತ್ವ ಅಲ್ಪಸಂಖ್ಯಾತರಿಗೆ(ಹಿಜ್ರಾಗಳು,ಕೋಥಿಗಳು,ಜೋಗಪ್ಪಂದಿರು,/ಎಫ್‌ಟುಎಂ/ಎಂಟುಎಫ್/ಮಂಗಳಮುಖಿಯರು)- ಆರ್ಥಿಕ ಸಹಾಯವನ್ನು ಒದಗಿಸಿ ಸಮಾಜದ ಮುಖ್ಯವಾಹಿನಿಗೆ ತರುವ ದೃಷ್ಟಿಯಿಂದ ರೂ.500ಗಳ ಮಾಸಾಶನ ನೀಡಲು "ಮೈತ್ರಿ" ಯೋಜನೆಯನ್ನು ದಿನಾಂಕ:01-08-2013ರಿಂದ ಜಾರಿಗೆ ತಂದು ಆದೇಶಿಸಿದೆ.

1. ಉದ್ದೇಶಿತ ಫಲಾನುಭವಿಯ ಆದಾಯ ಗ್ರಾಮೀಣ ಪ್ರದೇಶಗಳಲ್ಲಿ ರೂ.12,000 ಗಳಿಗಿಂತ ಅಥವಾ ನಗರ ಪ್ರದೇಶಗಳಲ್ಲಿ ರೂ.17,000 ಗಳಿಗಿಂತ ಕಡಿಮೆ ಇರತಕ್ಕದ್ದು.
2. ಉದ್ದೇಶಿತ ಫಲಾನುಭವಿಯು ಲಿಂಗತ್ವ ಅಲ್ಪ ಸಂಖ್ಯಾತರೆಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸುತ್ತೋಲೆ ಸಂಖ್ಯೆ:ಮಮಇ 11 ಮಅನಿ 2013, ದಿನಾಂಕ:29-07-2013ರಂತೆ ಗುರುತಿಸತಕ್ಕದ್ದು. ಅದರಂತೆ ಲಿಂಗತ್ವ ಅಲ್ಪಸಂಖ್ಯಾತರುಗಳನ್ನು ಆರೋಗ್ಯ ಕುಟುಂಬ ಮತ್ತು ಕಲ್ಯಾಣ ಇಲಾಖೆಯಿಂದ ಲಿಂಗತ್ವ ದೃಡೀಕರಣ ಪ್ರಮಾಣ ಪತ್ರವನ್ನು ಪಡೆಯಲು ಇವರುಗಳು ಎದುರಿಸಬಹುದಾದ ತೊಂದರೆಗಳನ್ನು ನಿವಾರಿಸಲು, ಲಿಂಗತ್ವ ಅಲ್ಪ ಸಂಖ್ಯಾತರುಗಳು "ನಿರ್ವಾಣ್" ಆಗಿದ್ದಲ್ಲಿ ಮಾತ್ರ ಲಿಂಗತ್ವವನ್ನು ಗುರುತಿಸಲು ಸಾಧ್ಯವೆಂದು ಹಾಗೂ ವೈದ್ಯರು ಸಹ ಪ್ರಮಾಣ ಪತ್ರ ನೀಡಲು ಸಹಕಾರಿಯಾಗುತ್ತದೆ. ಆದರೆ, "ನಿರ್ವಾಣ್" ಆಗದವರಿಗೆ ವೈದ್ಯಕೀಯ ಪ್ರಮಾಣ ಪತ್ರ ನೀಡಲು ಸಾಧ್ಯವಾಗುತ್ತಿಲ್ಲವೆಂಬುದನ್ನು ಸರ್ಕಾರವು ಮನಗಂಡು, ಲಿಂಗತ್ವ ಅಲ್ಪಸಂಖ್ಯಾತರಲ್ಲರಿಗೂ